# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 03.01.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು- ವಾರ್ಡ್ 71 |
| 3 | ಶ್ರೀ ಕಮಲಪ್ಪ ಗಡ್ಡಿಮನಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಶ್ರೀ ಶ್ರೀನಿವಾಸ್ ವಿ | ಮೀಟರ್ ಮಾಪಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಶ್ರೀ ತಿಪ್ಪೇಸ್ವಾಮಿ ಕೆ ಓ | ಪಿ.ಹೆಚ್.ಸಿ ಹೆಗ್ಗನಹಳ್ಳಿ |
| 6 | ಕೆ ಶಿವಲಿಂಗೇಗೌಡ | ತೋಟಗಾರಿಕೆ ಇಲಾಖೆ |
| 7 | ಕೆ.ಎ.ಉಮೇಶ್ | ಸದಸ್ಯರು |
| 8 | ಶ್ರೀ ವೆಂಕಟರಾಜು | ಸದಸ್ಯರು |
| 9 | ಶ್ರೀ ಎನ್ ಜಗದೀಶ್ | ಬೆಸ್ಕಾಂ ಇಲಾಖೆ |
| 10 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ರಸ್ತೆಗುಂಡಿಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಶೇಕಡಾ 30ರಷ್ಟು ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ. ಇನ್ನುಳಿದ ರಸ್ತೆಗುಂಡಿಗಳನ್ನು ಮುಚ್ಚಲು ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ವಿಷಯ ಸಂಖ್ಯೆ: 2 :- ಸುಂಕದಕಟ್ಟೆ ಹೊಯ್ಸಳ ನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ**

ವಾರ್ಡ್ ಕಮಿಟಿ ಸದಸ್ಯರು ಹಾಗೂ ಸುಂಕದಕಟ್ಟೆ ನಾಗರೀಕರ ಹಿತರಕ್ಷಣಾ ವೇದಿಕೆ (ರಿ). ಅಧ್ಯಕ್ಷರೂ ಆದ ಶ್ರೀ ವೆಂಕಟರಾಜು ರವರು ಮಾತನಾಡಿ, ಸುಂಕದಕಟ್ಟೆ ಹೊಯ್ಸಳನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ ಪತ್ರ ಮುಖೇನ ಸಭೆಯ ಗಮನಕ್ಕೆ ತಂದಿದ್ದು, ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಸಲಹೆ ನೀಡಬೇಕೆಂದು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಪತ್ರದಲ್ಲಿ ತಿಳಿಸಿರುವ ಸಮಸ್ಯೆಗಳ ಪೈಕಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಸಿಬ್ಬಂದಿಗೆ ದೂರಿನ ಪ್ರತಿಯನ್ನು ನೀಡಿ ಮೇಲಾಧಿಕಾರಿಗಳ ಗಮನ ಸೆಳೆದು ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಿದರು.

- **ವಿಷಯ ಸಂಖ್ಯೆ:3**

**ವಾರ್ಡ್ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ 71ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬೀದಿದೀಪಗಳ ನಿರ್ವಹಣೆಗೆ ಬಳಸಲಾಗುತ್ತಿರುವ ವಾಹನವನ್ನು ಬಳಸಿಕೊಂಡು ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

- **ವಿಷಯ ಸಂಖ್ಯೆ:4**

**ವಾರ್ಡ್ ವ್ಯಾಪ್ತಿಯಲ್ಲಿ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸುವ ಬಗ್ಗೆ:**

ಶ್ರೀ ವೆಂಕಟರಾಜು, ಸದಸ್ಯರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ಹೊಯ್ಸಳನಗರದಲ್ಲಿ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ ಹೊಸ ವಿದ್ಯುತ್ ಕಂಬಗಳನ್ನು ಹಾಕಲು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಸಿಬ್ಬಂದಿಗೆ ಈ ಬಗ್ಗೆ ಮೇಲಾಧಿಕಾರಿಗಳ ಗಮನ ಸೆಳೆದು ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಿದರು.

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ